**All India Radio: Bangalore**
**National Bulletin In Kannada**
**27.04.2026 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.04.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ಪಶ್ಚಿಮ ಬಂಗಾಳ ವಿಧಾನಸಭೆಯ ಅಂತಿಮ ಹಂತದ ಚುನಾವಣೆ: ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ಇಂದು ವಿವಿಧ ಪಕ್ಷಗಳ ನಾಯಕರಿಂದ ಬಿರುಸಿನ ಪ್ರಚಾರ**

**೨. ಆಪ್ ಸಂಸದರ ವಿಲೀನಕ್ಕೆ ಸಭಾಪತಿ ಅನುಮೋದನೆ; ರಾಜ್ಯಸಭೆಯಲ್ಲಿ ಬಿಜೆಪಿ ಸದಸ್ಯರ ಸಂಖ್ಯೆ ೧೧೩ಕ್ಕೆ ಏರಿಕೆ**

**೩. ಭಾರತ-ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಇಂದು ಸಹಿ ನಿರೀಕ್ಷೆ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಇಂದಿನ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ**

**<>><><*><><<>**

ಪಶ್ಚಿಮ ಬಂಗಾಳ ವಿಧಾನಸಭೆಯ ಎರಡನೇ ಮತ್ತು ಅಂತಿಮ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ತೆರೆಬೀಳಲಿದೆ. ವಿವಿಧ ಪಕ್ಷಗಳ ರಾಜಕೀಯ ನಾಯಕರು ಮತದಾರರನ್ನು ಸೆಳೆಯಲು ಅಂತಿಮ ಕಸರತ್ತಿನಲ್ಲಿ ತೊಡಗಿದ್ದಾರೆ. ಇದೇ ಬುಧವಾರ, ಎರಡನೇ ಹಂತದ ಮತದಾನ ನಡೆಯಲಿದೆ. ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಜಗತ್‌ದಲ್‌ನ ಜಿಲೇಪಿ ಮಠದಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ಬೆಹಾಲಾ ಮತ್ತು ಚಂದನ್‌ನಗರದಲ್ಲಿ ರೋಡ್ ಶೋಗಳನ್ನು ನಡೆಸಲಿದ್ದಾರೆ. ಮತ್ತೊಂದೆಡೆ, ತೃಣಮೂಲ ಕಾಂಗ್ರೆಸ್ ನಾಯಕಿ ಮಮತಾ ಬ್ಯಾನರ್ಜಿ, ಜಾದವ್‌ಪುರ ಹಾಗೂ ಭಬಾನಿಪುರದಲ್ಲಿ ಪ್ರಚಾರ ನಡೆಸಲಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಮತದಾನ ಕಳೆದ ೨೩ ರಂದು ನಡೆಯಿತು. ಕೇರಳ, ತಮಿಳುನಾಡು, ಅಸ್ಸಾಂ ರಾಜ್ಯಗಳಲ್ಲಿ ನಡೆದ ವಿಧಾನಸಭಾ ಚುನಾವಣೆಗಳು ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿ ಹಾಗೂ ಪಶ್ಚಿಮ ಬಂಗಾಳದಲ್ಲಿ ಎರಡು ಹಂತಗಳ ಚುನಾವಣೆಯ ಮತ ಎಣಿಕೆ ಮೇ ೪ ರಂದು ನಡೆಯಲಿದೆ.

**<>><><*><><<>**

ಚುನಾವಣೆ ನಡೆಯುತ್ತಿರುವ ಪಶ್ಚಿಮ ಬಂಗಾಳದಲ್ಲಿ ೭೯ ಕಚ್ಚಾ ಬಾಂಬ್‌ಗಳನ್ನು ವಶಪಡಿಸಿಕೊಂಡಿರುವ ಬಗ್ಗೆ ತನಿಖೆ ನಡೆಸಲು ರಾಷ್ಟ್ರೀಯ ತನಿಖಾ ಸಂಸ್ಥೆ ಪ್ರಕರಣ ದಾಖಲಿಸಿದೆ. ಈ ಸಂಬಂಧ ಕೇಂದ್ರ ಗೃಹ ಸಚಿವಾಲಯದ ನಿರ್ದೇಶನದ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಾಜ್ಯದ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಹಂತಕ್ಕೆ ಕೆಲವು ದಿನಗಳ ಮೊದಲು, ದಕ್ಷಿಣ ೨೪ ಪರಗಣ ಜಿಲ್ಲೆಯ ಭಂಗಾರ್‌ನಲ್ಲಿ ಟಿಎಂಸಿ ಕಾರ್ಯಕರ್ತ ಎಂದು ಹೇಳಲಾದ ವ್ಯಕ್ತಿಯ ಮನೆಯಿಂದ ಪೊಲೀಸರು ಹೆಚ್ಚಿನ ಸಂಖ್ಯೆಯ ಕಚ್ಚಾ ಬಾಂಬ್‌ಗಳನ್ನು ವಶಪಡಿಸಿಕೊಂಡ ನಂತರ ಈ ನಿರ್ದೇಶನ ಬಂದಿದೆ.

ಮಾರ್ಚ್ ೧೮ ರಂದು ಭಂಗಾರ್‌ನ ಚಲತಬೇರಿಯಾದ ಪಶ್ಚಿಮ ಬಮುನಿಯಾ ಗ್ರಾಮದಲ್ಲಿ ಕಚ್ಚಾ ಬಾಂಬ್‌ಗಳನ್ನು ಜೋಡಿಸುತ್ತಿದ್ದಾಗ ಸ್ಫೋಟ ಸಂಭವಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ವಹೀದುಲ್ ಇಸ್ಲಾಂ ಮೊಲ್ಲಾ ಈ ಘಟನೆಯಲ್ಲಿ ನೇರವಾಗಿ ಭಾಗಿಯಾಗಿದ್ದಾನೆ ಎಂದು ಎನ್‌ಐಎ ಮೂಲಗಳು ವರದಿ ಮಾಡಿವೆ.

<>><><*><><<>

ರಾಜ್ಯಸಭೆಯಲ್ಲಿ ಬಿಜೆಪಿ ಸಂಸದರ ಒಟ್ಟು ಸಂಖ್ಯೆ ೧೧೩ಕ್ಕೆ ಏರಿಕೆಯಾಗಿದೆ. ಆಮ್ ಆದ್ಮಿ ಪಕ್ಷದಿಂದ ಪಕ್ಷಾಂತರಗೊಂಡ ೭ ಸಂಸದರ ವಿಲೀನಕ್ಕೆ ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅನುಮೋದನೆ ನೀಡಿದ್ದಾರೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಬಿಜೆಪಿಗೆ ಸೇರ್ಪಡೆಯಾದ ಸಂಸದರಲ್ಲಿ ರಾಘವ ಚಡ್ಡಾ, ಡಾ.ಅಶೋಕ ಕುಮಾರ್ ಮಿತ್ತಲ್, ಸಂದೀಪ್ ಪಾಠಕ್, ಸ್ವಾತಿ ಮಲಿವಾಲ್ ಮತ್ತು ಹರ್ಭಜನ್ ಸಿಂಗ್ ಸೇರಿದ್ದಾರೆ. ಇದರ ನಂತರ ಮೇಲ್ಮನೆಯಲ್ಲಿ ಆಮ್ ಆದ್ಮಿ ಪಕ್ಷದ ಸಂಸದರ ಸಂಖ್ಯೆ ಮೂರಕ್ಕೆ ಕುಸಿದಿದೆ.

<>><><*><><<>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ನಾಳೆ ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ-ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ವಿಶ್ವಾದ್ಯಂತ ಭದ್ರತಾ ಸವಾಲುಗಳು ಎದುರಾಗಿರುವ ಈ ಸಂದರ್ಭದಲ್ಲಿ ಜಾಗತಿಕ ಶಾಂತಿಯ ಬಗ್ಗೆ ಭಾರತಕ್ಕಿರುವ ಬದ್ಧತೆಯನ್ನು ಸಭೆಯಲ್ಲಿ ಒತ್ತಿ ಹೇಳಲಾಗುವುದು. ಭಯೋತ್ಪಾದನೆ ಮತ್ತು ಉಗ್ರವಾದದ ವಿರುದ್ಧ ಭಾರತ ಹೊಂದಿರುವ ಶೂನ್ಯ ಸಹಿಷ್ಣುತೆ ನಿಲುವನ್ನು ಸಭೆಯಲ್ಲಿ ಸ್ಪಷ್ಟಪಡಿಸಲಾಗುವುದು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಎಸ್‌ಸಿಒ ಸದಸ್ಯ ರಾಷ್ಟ್ರಗಳ ಇತರ ರಕ್ಷಣಾ ಸಚಿವರೊಂದಿಗೆ ದ್ವಿಪಕ್ಷೀಯ

ಮಾತುಕತೆ ನಡೆಸಲು ಮತ್ತು ಅಲ್ಲಿನ ಭಾರತೀಯ ಸಮುದಾಯವನ್ನು ಭೇಟಿ ಮಾಡಲು ಉತ್ಸುಕನಾಗಿದ್ದೇನೆ ಎಂದು ಇದೇ ವೇಳೆ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬೇಸಿಗೆಯ ವಾಸ್ತವ್ಯಕ್ಕಾಗಿ ಇಂದಿನಿಂದ ಐದು ದಿನ ಹಿಮಾಚಲ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು ಶಿಮ್ಲಾದ ಮಶೋಬ್ರಾದಲ್ಲಿರುವ ರಾಷ್ಟ್ರಪತಿ ನಿವಾಸದಲ್ಲಿ ಇಂದು ತಂಗಲಿದ್ದಾರೆ. ನಾಳೆ ಶಿಮ್ಲಾದ ಲೋಕಭವನದಲ್ಲಿ ಹಿಮಾಚಲ ಪ್ರದೇಶದ ರಾಜ್ಯಪಾಲರು ಆಯೋಜಿಸಿರುವ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರಪತಿಗಳು ಬುಧವಾರ ಅಟಲ್ ಸುರಂಗಕ್ಕೆ ಭೇಟಿ ನೀಡಲಿದ್ದಾರೆ. ಮರುದಿನ ಪಾಲಂಪುರದಲ್ಲಿರುವ ಚೌಧರಿ ಸರ್ವಣ್ ಕುಮಾರ್ ಹಿಮಾಚಲ ಪ್ರದೇಶ ಕೃಷಿ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿಯೂ ಭಾಗಿಯಾಗಲಿದ್ದಾರೆ. ಅದೇ ದಿನ ಅವರು, ಮಶೋಬ್ರಾದಲ್ಲಿರುವ ರಾಷ್ಟ್ರಪತಿ ನಿವಾಸದಲ್ಲಿ ಔತಣಕೂಟ ಆಯೋಜಿಸಿದ್ದಾರೆ. ತಮ್ಮ ಪ್ರವಾಸದ ಕೊನೆಯ ದಿನವಾದ ಮೇ ೧ ರಂದು ಶಿಮ್ಲಾದಲ್ಲಿರುವ ಸೇನಾ ತರಬೇತಿ ಕಮಾಂಡ್‌ಗೆ ಭೇಟಿ ನೀಡಲಿದ್ದಾರೆ.

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನ ಸಿಕ್ಕಿಂಗೆ ಭೇಟಿ ನೀಡಲಿದ್ದಾರೆ. ಸಿಕ್ಕಿಂನ ಗ್ಯಾಂಗ್ಟಾಕ್‌ನಲ್ಲಿರುವ ಆರ್ಕಿಡೇರಿಯಂಗೆ ಅವರು ಇಂದು ಭೇಟಿ ನೀಡಲಿದ್ದಾರೆ. ಅವರು ಸಿಕ್ಕಿಂನ ೫೦ನೇ ರಾಜ್ಯ ಸಂಸ್ಥಾಪನಾ ದಿನಾಚರಣೆಯ ಸಮಾರೋಪ ಸಮಾರಂಭದಲ್ಲಿ ಭಾಗಿಯಾಗಿ ರಾಜ್ಯಾದ್ಯಂತದ ನಾಲ್ಕು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಮೂಲಸೌಕರ್ಯ, ಸಂಪರ್ಕ, ಆರೋಗ್ಯ, ರಕ್ಷಣೆ, ಶಿಕ್ಷಣ, ವಿದ್ಯುತ್, ನಗರಾಭಿವೃದ್ಧಿ, ಪರಿಸರ, ಪ್ರವಾಸೋದ್ಯಮ, ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳ ಯೋಜನೆಗಳು, ಸಮಗ್ರ ಅಭಿವೃದ್ಧಿಯನ್ನು ವೇಗಗೊಳಿಸುವ ಗುರಿ ಹೊಂದಿವೆ.

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆಯಿಂದ ಎರಡು ದಿನ ಉತ್ತರ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ನಾಳೆ ಅವರು, ವಾರಾಣಸಿಯಲ್ಲಿ ಮಹಿಳಾ ಸಮ್ಮೇಳನದಲ್ಲಿ ಭಾಗಿಯಾಗಲಿದ್ದು, ಆರು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬನಾರಸ್-ಪುಣೆ ಮತ್ತು ಅಯೋಧ್ಯೆ-ಮುಂಬೈ

ನಡುವಿನ ಎರಡು ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ.

**<>><><*><><<>**

ಭಾರತ ಮತ್ತು ನ್ಯೂಜಿಲೆಂಡ್ ಇಂದು ನವದೆಹಲಿಯಲ್ಲಿ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲಿವೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ಇದು ಎರಡೂ ದೇಶಗಳ ನಡುವಿನ ಆರ್ಥಿಕ ಸಂಬಂಧಗಳನ್ನು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ. ವರ್ಷಗಳ ಉನ್ನತ ಮಟ್ಟದ ಚರ್ಚೆಗಳ ನಂತರ ಒಪ್ಪಂದವನ್ನು ಅಂತಿಮಗೊಳಿಸಲಾಗಿದೆ. ಮುಂದಿನ ಐದು ವರ್ಷಗಳಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು ಐದು ಶತಕೋಟಿ ಡಾಲರ್‌ಗಳಿಗೆ ದ್ವಿಗುಣಗೊಳಿಸುವ ಗುರಿಯನ್ನು ಮುಕ್ತ ವ್ಯಾಪಾರ ಒಪ್ಪಂದ ಹೊಂದಿದೆ ಎಂದು ಅವರು ಹೇಳಿದರು. ಈ ಒಪ್ಪಂದವು ಭಾರತೀಯ ಸರಕುಗಳಿಗೆ ಮಾರುಕಟ್ಟೆ ಪ್ರವೇಶವನ್ನು ಗಮನಾರ್ಹವಾಗಿ ಸುಧಾರಿಸುತ್ತದೆ ಮತ್ತು ವ್ಯಾಪಾರ ಅವಕಾಶಗಳನ್ನು ಹೆಚ್ಚಿಸುತ್ತದೆ ಎಂದು ಸಚಿವ ಪಿಯೂಷ್ ಗೋಯಲ್ ತಿಳಿಸಿದರು.

**<>><><*><><<>**

ದೇಶದಲ್ಲಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ವಿತರಣೆ ಸಾಮಾನ್ಯವಾಗಿವೆ. ಶನಿವಾರ ೫೧.೮ ಲಕ್ಷಕ್ಕೂ ಹೆಚ್ಚು ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. MYPNGD.in ವೆಬ್‌ಸೈಟ್ ಮೂಲಕ ೪೨ ಸಾವಿರದ ಐನೂರಕ್ಕೂ ಹೆಚ್ಚು PNG ಗ್ರಾಹಕರು ತಮ್ಮ LPG ಸಂಪರ್ಕಗಳನ್ನು ಬಿಟ್ಟುಕೊಟ್ಟಿದ್ದಾರೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಏಪ್ರಿಲ್ ೧ ರಿಂದ ೨೫ ರವರೆಗೆ ಒಟ್ಟು ೧ ಲಕ್ಷ ೬೪ ಸಾವಿರದ ಆರುನೂರ ಐವತ್ತೈದು ಮೆಟ್ರಿಕ್ ಟನ್ ವಾಣಿಜ್ಯ LPG ಮಾರಾಟವಾಗಿದೆ. ದೇಶಾದ್ಯಂತ ಪೆಟ್ರೋಲಿಯಂ ಉತ್ಪನ್ನಗಳು ಮತ್ತು LPG ಯ ನಿರಂತರ ಲಭ್ಯತೆಯನ್ನು ಸಚಿವಾಲಯ ಖಚಿತಪಡಿಸುತ್ತಿದೆ ಎಂದು ಸಚಿವಾಲಯ ಹೇಳಿದೆ.

**<>><><*><><<>**

ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ನಾಳೆ ಬೆಳಗ್ಗೆ ೧೧ ಗಂಟೆಗೆ ಕರ್ನಾಟಕದ ಉಡುಪಿಯ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಜೆಮ್ಸ್ ಅಂಡ್ ಜ್ಯೂವೆಲರಿ - ಐಐಜಿಜೆ ಕ್ಯಾಂಪಸ್‌ಗೆ ಭೇಟಿ ನೀಡಲಿದ್ದಾರೆ. ನಂತರ ಮಧ್ಯಾಹ್ನ ೩.೩೦ಕ್ಕೆ ಸಚಿವರು ನಿಟ್ಟೆ ವಿಶ್ವವಿದ್ಯಾಲಯದಲ್ಲಿ ಎನ್.ವಿನಯ್ ಹೆಗ್ಡೆ ಸ್ಮಾರಕ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<>><><*><><<>

ಈ ತಿಂಗಳ ೧೦ ಮತ್ತು ೧೧ ರ ನಡುವೆ ನಡೆಸಿದ ಮಾದಕ ದ್ರವ್ಯ ವಿರೋಧಿ ಕಾರ್ಯಾಚರಣೆಗಳಲ್ಲಿ ಈಶಾನ್ಯ ರೈಲ್ವೆಯ ರೈಲ್ವೆ ರಕ್ಷಣಾ ಪಡೆಯು, ೧೯ ಲಕ್ಷ ರೂಪಾಯಿಗೂ ಹೆಚ್ಚು ಮೌಲ್ಯದ ಸುಮಾರು ೬೦ ಕಿಲೋಗ್ರಾಂಗಳಷ್ಟು ಗಾಂಜಾ ವಶಪಡಿಸಿಕೊಂಡಿದೆ. ಅಧಿಕೃತ ಮೂಲಗಳ ಪ್ರಕಾರ, NFR ವ್ಯಾಪ್ತಿಯಲ್ಲಿರುವ ಅನೇಕ ಸ್ಥಳಗಳಿಂದ ಕಳ್ಳಸಾಗಣೆ ಮಾಡಲಾದ ವಸ್ತುವನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ಅದರ ಸಾಗಣೆಯಲ್ಲಿ ಭಾಗಿಯಾಗಿದ್ದ ಮೂವರು ವ್ಯಕ್ತಿಗಳನ್ನು ಬಂಧಿಸಿ, ಮುಂದಿನ ಕ್ರಮಕ್ಕಾಗಿ ರೈಲ್ವೆ ಪೊಲೀಸರಿಗೆ ಹಸ್ತಾಂತರಿಸಲಾಗಿದೆ.

<>><><*><><<>

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<>><><*><><<>

ಈಜಿಪ್ಟ್‌ನ ಕೈರೋದಲ್ಲಿ ನಡೆದ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್ ೨೦೨೬ರಲ್ಲಿ ಭಾರತದ ಶೂಟರ್‌ಗಳು ಒಟ್ಟು ೧೬ ಪದಕಗಳನ್ನು ಗೆಲ್ಲುವ ಮೂಲಕ ಪದಕ ಪಟ್ಟಿಯಲ್ಲಿ ಅಗ್ರಸ್ಥಾನ ಪಡೆದಿದ್ದಾರೆ.  ಇದರಲ್ಲಿ ೫ ಚಿನ್ನ, ೬ ಬೆಳ್ಳಿ ಮತ್ತು ೫ ಕಂಚಿನ ಪದಕಗಳು ಸೇರಿವೆ. ಪುರುಷರ ೫೦ ಮೀಟರ್ ರೈಫಲ್ ೩ ಪೊಸಿಷನ್ಸ್ ವಿಭಾಗದಲ್ಲಿ ಹೇಮಂತ್ ಬರ್ಮನ್ ಬೆಳ್ಳಿ ಪದಕ ವಿಜೇತರಾದರು. ಮಿಶ್ರ ಟ್ರ್ಯಾಪ್ ತಂಡ ವಿಭಾಗದಲ್ಲಿ ಜುಹೇರ್ ಖಾನ್ ಮತ್ತು ಆದ್ಯ ಕಾತ್ಯಲ್ ಜೋಡಿ ಕಂಚಿನ ಪದಕ ಗೆದ್ದಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ  ><><<>